ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರು ಹಾಗೂ ಇತರ ಹುದ್ದೆಗಳು

839 (1474) ಶ್ರೀ ಬಸವರಾಜನ್ ಎಸ್.ಕೆ. (ಚಿತ್ರದುರ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿತ್ರದುರ್ಗ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರ ಹಾಗೂ ಇತರೆ ಸಿಬ್ಬಂದಿಗಳ ಸಂಖ್ಯೆ ಎಷ್ಟು (ವಿವರಗಳನ್ನು ನೀಡುವುದು);

ಆ) ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಕೊರತೆಗಳಿಂದ ಆಸ್ಪತ್ರೆಗೆ ಬರುವ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ತೊಂದರೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಈಗ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಉ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಚಿತ್ರದುರ್ಗ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ 5 ವೈದ್ಯಾಧಿಕಾರಿಗಳ ಹಾಗೂ 151 ಇತರೆ ಸಿಬ್ಬಂದಿ ಹುದ್ದೆಗಳು ಖಾಲಿ ಇರುತ್ತವೆ.

(ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ).

ಆ) ಮತ್ತು ಇ) ಲಭ್ಯವಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ಸೇವೆ ಪಡೆದು ರೋಗಿಗಳಿಗೆ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.

ಈ) ಮತ್ತು ಉ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.

ವೈದ್ಯರ/ಸಿಬ್ಬಂದಿ ಸೇವೆ ಲಭ್ಯವಾದ ನಂತರ ಆದ್ಯತಾನುಸಾರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಅನುಬಂಧ – 1

ಚಿತ್ರದುರ್ಗ ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ವೈದ್ಯರು ಹಾಗೂ ಸಿಬ್ಬಂದಿಗಳ ಸಂಖ್ಯೆ ಈ ಕೆಳಗಿನಂತಿದೆ.

ಕ್ರ ಸಂ.	ಹುದ್ದೆ	ಮಂಜೂರಾಗಿರುವುದು	ಕಾರ್ಯನಿರ್ವಹಿಸುತ್ತಿರುವವರು	ಖಾಲಿ	ಷರಾ
1	ವೈದ್ಯಾಧಿಕಾರಿಗಳು	28	23	05	
2	ಲಿಪಿಕ ನೌಕರರು	31	21	10	
3	ಅರೆವೈದ್ಯಕೀಯ ಸಿಬ್ಬಂದಿ	16	05	11	
4	ಶುಶ್ರೂಷ ಸಿಬ್ಬಂದಿ	107	87	20	
5	ಆರೋಗ್ಯ ಸಹಾಯಕರು	11	07	04	
6	ತಾಂತ್ರಿಕ ಸಿಬ್ಬಂದಿ	40	15	25	
7	ವಾಹನ ಚಾಲಕರು	10	04	06	
8	ಗ್ರೂಪ್ 'ಡಿ' ನೌಕರರು	148	75	73	ಫಾರ್ಮಸಿಯಲ್ಲಿ 10 ಹುದ್ದೆ ತುಂಬುವಂತಿಲ್ಲ ಮತ್ತು ನಾನ್ ಕ್ಲಿನಿಕಲ್ ಹೊರಗುತ್ತಿಗೆ ನೀಡಿದೆ.
9	ಬೋಗಕರು	03	01	02	
	ಒಟ್ಟು	394	238	156	

ಅನುಬಂಧ – II

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ ತೆಗೆದುಕೊಳ್ಳಲಿರುವ ಕ್ರಮಗಳ ವಿವರ

2. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸ ಲಾಗುವುದು.

8. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಠ ರೂ. 50,000 ರವರೆಗೆ ಗೌರವ ಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್.ಹೆಚ್.ಎಂ.) ಅಡಿ - ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ. 500, (2) ಅರೆವಳಿಕೆ ತಜ್ಞರಿಗೆ ರೂ. 1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ. 1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

9. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್. ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ 2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ. 5,000 ಗೌರವ ಧನ ನೀಡಿ ರಿಟೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

10. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.
11. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು.
12. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.
13. ಪ್ರಸ್ತುತ ಗ್ರೂಪ್-ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.

ಅಂಗನವಾಡಿ ಶಿಕ್ಷಕಿಯರನ್ನು ಖಾಯಂಗೊಳಿಸುವುದು

840 (1029) ಶ್ರೀ ಬೆಳ್ಳುಳ್ಳಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂಗನವಾಡಿ ಶಿಕ್ಷಕಿಯರು ಹಾಗೂ ಕಾರ್ಯಕರ್ತೆಯರುಗಳನ್ನು ಖಾಯಂಗೊಳಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.